4
94

# ಶ್ರೀ ಶಶಿಲ್ ಜಿ. ನಮೋಶಿ, ವಿಧಾನ ಪರಿಷತ್ ಸದಸ್ಯರು ಇವರ ನಿಯಮ 72ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

## ವಿಷಯ:

ಸಾರ್ವಜನಿಕ ಶಿಕ್ಷಣ ಇಲಾಖೆಯ ಕಲಬುರಗಿ ಆಯುಕ್ತಾಲಯದ ವ್ಯಾಪ್ತಿಯಲ್ಲಿ ಮುಂಬಡ್ತಿ ಹೊಂದಿ ಕಾರ್ಯನಿರ್ವಹಿಸುತ್ತಿರುವ ಲೆಕ್ಕಾಧೀಕ್ಷಕರ ವೇತನ ಶ್ರೇಣಿಯನ್ನು ಸರಿಯಾಗಿ ನಿಗದಿಪಡಿಸಬೇಕೆಂದು ಶಿಕ್ಷಣ ಇಲಾಖೆಯು ಹಣಕಾಸಿನ ಇಲಾಖೆಯಿಂದ ಅಭಿಪ್ರಾಯ ಪಡೆದು ಆದೇಶವನ್ನು ಹೊರಡಿಸಿರುತ್ತದೆ. ಬೆಂಗಳೂರು ಮತ್ತು ಧಾರವಾಡ ವ್ಯಾಪ್ತಿಯಲ್ಲಿ ಮುಂಬಡ್ತಿ ಹೊಂದಿ ಕಾರ್ಯನಿರ್ವಹಿಸುತ್ತಿರುವ ಲೆಕ್ಕಾಧೀಕ್ಷಕರಿಗೆ ವೇತನ ಶ್ರೇಣಿಯನ್ನು ಸರಿಯಾಗಿ ನಿಗದಿಗೊಳಿಸಲಾಗಿತ್ತದೆ. ಆದರೆ, ಸರ್ಕಾರದ ಆದೇಶವಾಗಿದ್ದರೂ, ಕಲಬುರಗಿ ಆಯುಕ್ತಾಲಯದ ವ್ಯಾಪ್ತಿಯಲ್ಲಿ ಲೆಕ್ಕಾಧೀಕ್ಷಕರ ವೇತನ ಶ್ರೇಣಿಯನ್ನು ನಿಗದಿಗೊಳಿಸದಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

## ಉತ್ತರ:

ಕಲಬುರಗಿ ಆಯುಕ್ತಾಲಯದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 30 ಎಸ್‌ಆರ್‌ಪಿ 2013 ದಿನಾಂಕ: 24.03.2017 ರಲ್ಲಿನ ಕ್ರಮ ಸಂಖ್ಯೆ: 63ರ ಸಾರ್ವಜನಿಕ ಶಿಕ್ಷಣ ಇಲಾಖೆಯ ಲೆಕ್ಕ ಅಧೀಕ್ಷಕರ ಹುದ್ದೆಗೆ ನಿಗಧಿಪಡಿಸಿದ ವೇತನ ಶ್ರೇಣಿ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 06 ಎಸ್‌ಆರ್‌ಪಿ 2018 ದಿನಾಂಕ: 19.04.2018ರ ಪರಿಷ್ಕೃತ ವೇತನ ಶ್ರೇಣಿ ರೂ.37900-950-39800-1100-46400-1250-53900-1450-62600-1650-70850 ರಡಿಯಲ್ಲಿ ಲೆಕ್ಕ ಅಧೀಕ್ಷಕರ ಹುದ್ದೆಗೆ ಮುಂಬಡ್ತಿಯನ್ನು ನೀಡಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 30 ಎಸ್‌ಆರ್‌ಪಿ 2013 ದಿನಾಂಕ: 24.03.2017 ರನ್ವಯ ರಾಜ್ಯದ ಎಲ್ಲಾ ಇಲಾಖೆಗಳಲ್ಲಿನ ಹುದ್ದೆಗಳ ವೇತನ ಶ್ರೇಣಿಯನ್ನು ಜಾರಿಗೊಳಿಸಿದ್ದು, ಸದರಿ ಆದೇಶದಲ್ಲಿ ರಾಜ್ಯ ಲೆಕ್ಕ ಪತ್ರ ಇಲಾಖೆಯಲ್ಲಿನ ಲೆಕ್ಕ ಅಧೀಕ್ಷಕರ ಹುದ್ದೆಯ ವೇತನ ಶ್ರೇಣಿಯನ್ನು ರೂ.21600-40050 ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಲೆಕ್ಕ ಅಧೀಕ್ಷಕರ ಹುದ್ದೆಯ ವೇತನ ಶ್ರೇಣಿಯನ್ನು ರೂ.20000-36300 ನಿಗಧಿಪಡಿಸಿ ಆದೇಶಿಸಲಾಗಿದೆ.

ಸದರಿ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 30 ಎಸ್‌ಆರ್‌ಪಿ 2013 ದಿನಾಂಕ: 24.03.2017 ರನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಲೆಕ್ಕ ಅಧೀಕ್ಷಕರ ಹುದ್ದೆಗೆ ನಿಗಧಿಪಡಿಸಿದ ವೇತನ ಶ್ರೇಣಿ ರೂ.20000-36300 ರಡಿಯಲ್ಲಿ ಪ್ರಸ್ತುತ, ಈ ವಿಭಾಗದಲ್ಲಿ ಖಾಲಿ ಇರುವ ಲೆಕ್ಕ ಅಧೀಕ್ಷಕರ ಹುದ್ದೆಗೆ ಮುಂಬಡ್ತಿಯನ್ನು ನೀಡಲಾಗಿದ್ದು, ಬೆಂಗಳೂರು ಹಾಗೂ ಧಾರವಾಡ ಆಯುಕ್ತಾಲಯಗಳಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯ ಲೆಕ್ಕ ಅಧೀಕ್ಷಕರ ಹುದ್ದೆಗೆ ವೇತನ ಶ್ರೇಣಿ ರೂ. 21600-40050 ರಡಿಯಲ್ಲಿ ಪರಿಗಣಿಸಿ ಮುಂಬಡ್ತಿಯನ್ನು ನೀಡಿರುವುದರಿಂದ ಯಾವ ವೇತನ ಶ್ರೇಣಿ ಸರಿಯಾಗಿದೆ ಎನ್ನುವುದರ ಕುರಿತು ಸೂಕ್ತ ಮಾರ್ಗದರ್ಶನ ನೀಡಲು ಈ ಕಛೇರಿ ಪತ್ರ ಸಂಖ್ಯೆ: ಸಿ1(1)/ಆಡಳಿತ/ಲೆಅಧೀಕ್ಷಕರ/ಮುಂಬಡ್ತಿ/55/2019-20, ದಿನಾಂಕ: 24/12/2019 & 09/09/2020 ರನ್ವಯ ಸರ್ಕಾರಕ್ಕೆ ಪತ್ರ ಬರೆದು ಕೋರಲಾಗಿತ್ತು.

......2

ಅದರಂತೆ, ಸರ್ಕಾರದ ಪತ್ರ ಸಂಖ್ಯೆ: ಇಡಿ 19 ಎಸ್‌ಟಿಬಿ 2020 ದಿನಾಂಕ: 04.03.2021ರಲ್ಲಿ ಆರ್ಥಿಕ ಇಲಾಖೆಯು ಆದೇಶದನ್ವಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 7 ಎಸ್‌ಆರ್‌ಪಿ 2000 ದಿನಾಂಕ: 02.03.2000ರಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಲೆಕ್ಕಾಧೀಕ್ಷಕರಿಗೆ ನಿಗಧಿಪಡಿಸಿರುವ ವೇತನ ಶ್ರೇಣಿ 20000-36300 ಸಮಂಜಸವಾಗಿರುತ್ತದೆ. ಅದರಂತೆ ಸದರಿ ವೇತನ ಶ್ರೇಣಿಗೆ 2018ರ ಪರಿಷ್ಕೃತ ವೇತನ ಶ್ರೇಣಿ 37900-70850ರಲ್ಲಿ ವೇತನವನ್ನು ನಿಗಧಿಗೊಳಿಸುವುದು ಸೂಕ್ತವಾಗಿರುತ್ತದೆ ಎಂದು ತಿಳಿಸಲಾಗಿರುತ್ತದೆ.

ಸರ್ಕಾರದ ಅಧಿಸೂಚನೆಯ ಸಂಖ್ಯೆ: ಎಫ್‌ಡಿ 30 ಎಸ್‌ಆರ್‌ಪಿ 2013 ದಿನಾಂಕ: 24/03/2017ರ ಅಂಶಗಳ ಕ್ರಮ ಸಂಖ್ಯೆ: 63 ಮತ್ತು 75ರಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಲೆಕ್ಕಾಧೀಕ್ಷಕರ ಹುದ್ದೆಗೆ ಮತ್ತು ರಾಜ್ಯ ಲೆಕ್ಕ ಪತ್ರ ಇಲಾಖೆಯ ಲೆಕ್ಕಾಧೀಕ್ಷಕರ ಹುದ್ದೆಗೆ 2012ರ ಪರಿಷ್ಕೃತ ವೇತನ ಶ್ರೇಣಿಯು ಕ್ರಮವಾಗಿ ರೂ. 20000-36000 ಹಾಗೂ ರೂ. 21600-40050 ಎಂಬುದಾಗಿ ನಿಗದಿಯಾಗಿರುತ್ತದೆ.

ಸಾರ್ವಜನಿಕ ಶಿಕ್ಷಣ ಇಲಾಖೆಯ ಕಲಬುರಗಿ ಆಯುಕ್ತಾಲಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಸ್.ಎ.ಎಸ್ ಪಾಸಾದ ಪ್ರಥಮ ದರ್ಜೆ ಸಹಾಯಕರಿಗೆ ಲೆಕ್ಕ ಅಧೀಕ್ಷಕರ ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡಿದ್ದು ವೇತನ ಶ್ರೇಣಿ ನಿಗದಿಪಡಿಸುವ ಕುರಿತಂತೆ ಕರ್ನಾಟಕ ನಾಗರೀಕ ಸೇವಾ (ಪರಿಷ್ಕೃತ ವೇತನ) ನಿಯಮಗಳು 2012 ಹಾಗೂ ಕರ್ನಾಟಕ ನಾಗರೀಕ ಸೇವಾ (ಪರಿಷ್ಕೃತ ವೇತನ) ನಿಯಮಗಳು 2018ರ ನಿಯಮಗಳ ನಿಯಮ 5 ಮತ್ತು ನಿಯಮ 7(5)ರನ್ವಯ ಸರ್ಕಾರಿ ನೌಕರನ ವೇತನವನ್ನು ಅವನು ಧಾರಣೆ ಮಾಡಿರುವ ಹುದ್ದೆಗೆ ಅನ್ವಯಿಸುವ ವೇತನ ಶ್ರೇಣಿಗೆ ಸಂವಾದಿಯಾದ 2012 ಮತ್ತು 2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಪುನರ್ ನಿಗದಿಪಡಿಸತಕ್ಕದ್ದಾಗಿರುತ್ತದೆ. ಆದರೆ, ಪರಿಷ್ಕೃತ ವೇತನ ಶ್ರೇಣಿಗಳ 5ನೇ ಅನುಸೂಚಿಯಲ್ಲಿ ನಮೂದಿಸಿರುವ ವೇತನ ಶ್ರೇಣಿಯನ್ನು ಆಧಾರವಾಗಿಸಿ ವೇತನ ಆಯೋಗದ ಶಿಫಾರಸ್ಸಿನಂತೆ ದಿನಾಂಕ: 02.03.2000ರ ಸರ್ಕಾರಿ ಆದೇಶದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಲೆಕ್ಕಾಧೀಕ್ಷಕರ ಹುದ್ದೆಯ ವೇತನ ಶ್ರೇಣಿಯನ್ನು ಈಗಾಗಲೇ ಪರಿಷ್ಕರಿಸಿ ಆದೇಶಗಳನ್ನು ಹೊರಡಿಸಿದ್ದರೂ ಸಹ ಅದನ್ನು ಅನ್ವಯಿಸುವ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಳ್ಳದಿರುವುದು ಅನಗತ್ಯ ಗೊಂದಲಕ್ಕೆ ಕಾರಣವಾಗಿರುತ್ತದೆಂದು ಆರ್ಥಿಕ ಇಲಾಖೆಯು ಅಭಿಪ್ರಾಯ ನೀಡಿರುತ್ತದೆ.

ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ರವರ ಅಧಿಸೂಚನೆ ದಿನಾಂಕ: 02.07.2018ರಲ್ಲಿ ಹಾಗೂ ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ ರವರ ಅಧಿಸೂಚನೆ ದಿನಾಂಕ: 02.07.2018ರಲ್ಲಿ ಲೆಕ್ಕಾಧೀಕ್ಷಕರ ಹುದ್ದೆಗೆ ವೇತನ ಶ್ರೇಣಿ ರೂ.21600-40050 (ಪರಿಷ್ಕೃತ ಶ್ರೇಣಿ ರೂ.40900-78200) ನಿಗಧಿಪಡಿಸಿ ಮುಂಬಡ್ತಿ ನೀಡಲಾಗಿದ್ದು. ಅದರಂತೆ, ಕಲಬುರಗಿ ವ್ಯಾಪ್ತಿಯಲ್ಲಿ ಬರುವ ಲೆಕ್ಕಾಧೀಕ್ಷರಿಗೂ ಅನ್ವಯಿಸಲು ಸರ್ಕಾರದ ಪತ್ರ ಸಂಖ್ಯೆ: ಇಪಿ 19 ಎಸ್‌ಟಿಬಿ 2020, ದಿನಾಂಕ:04.06.2022ರ ಪತ್ರದಲ್ಲಿ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಇವರಿಗೆ ತಿಳಿಸಲಾಗಿರುತ್ತದೆ.

ಅದರಂತೆ, ಕಲಬುರಗಿ ಆಯುಕ್ತಾಲಯದ ವ್ಯಾಪ್ತಿಯಲ್ಲಿ ವೇತನ ಶ್ರೇಣಿ ರೂ.37900-70850 ರಡಿಯಲ್ಲಿ ಲೆಕ್ಕ ಅಧೀಕ್ಷಕರ ಹುದ್ದೆಗೆ ನೀಡಲಾಗಿರುವ ಮುಂಬಡ್ತಿಯ ವೇತನ ಶ್ರೇಣಿಯನ್ನು ರೂ.40900-78200 ಎಂದು ನಿಗಧಿಪಡಿಸಿ ಆದೇಶಿಸಲು ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಇಪಿ 50 ಎಸ್‌ಟಿಬಿ 2023

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.